# All India Radio: Bangalore
# National Bulletins In Kannada
# 09.07.2025 / 19.35

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

ಮುಖ್ಯಾಂಶಗಳು

**<><*<><>*><>**

೧. ಪ್ರವಾಹ ಪೀಡಿತ ರಾಜ್ಯಗಳಿಗೆ ಕೇಂದ್ರ ಸರ್ಕಾರದಿಂದ ೧ ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಹಣ ಬಿಡುಗಡೆ

೨. ಭಾರತ ೬-ಜಿ ಕ್ರಾಂತಿಯ ಅಂಚಿನಲ್ಲಿದೆ ; ತಾಂತ್ರಿಕ ಹಬ್ ಮತ್ತು ಸ್ಪೋಕ್ ಆಫ್ ಎಕ್ಸಲೆನ್ಸ್ ಉದ್ಘಾಟಿಸಿ - ಜ್ಯೋತಿರಾಧಿತ್ಯ ಸಿಂಧಿಯಾ ಅಭಿಪ್ರಾಯ

೩. ವಿಕಸಿತ ಭಾರತದ ಗುರಿಯನ್ನು ಸಾಧಿಸುವಲ್ಲಿ ವಿಶ್ವವಿದ್ಯಾಲಯಗಳು ಪ್ರಮುಖ ಪಾತ್ರ ವಹಿಸುತ್ತವೆ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್

೪. ಭಾರತ ಇಂಗ್ಲೆಂಡ್ ೩ನೇ ಕ್ರಿಕೆಟ್ ಟೆಸ್ಟ್ - ಒಂದೇ ಓವರ್‌ನಲ್ಲಿ ಇಂಗ್ಲೆಂಡ್‌ನ ೨ ವಿಕೆಟ್ ಪಡೆದ ಆಲ್ ರೌಂಡರ್ ನಿತೀಶ್ ರೆಡ್ಡಿ

**<><*<><>*><>**

ಕೇಂದ್ರ ಸರ್ಕಾರ,ಪ್ರವಾಹ, ಭೂಕುಸಿತ ಪೀಡಿತ ರಾಜ್ಯಗಳಿಗೆ ೧ ಸಾವಿರದ ೬೬ ಕೋಟಿ ರೂಪಾಯಿಗಳಿಗೂ ಹೆಚ್ಚು ಹಣವನ್ನು ಬಿಡುಗಡೆ ಮಾಡಲು ಅನುಮೋದನೆ ನೀಡಿದೆ.

ಕೇಂದ್ರವು ಈಗಾಗಲೇ ೧೪ ರಾಜ್ಯಗಳಿಗೆ ರಾಜ್ಯ ವಿಪತ್ತು ಪರಿಹಾರ ನಿಧಿಯಿಂದ ೬ ಸಾವಿರದ ೧೬೬ ಕೋಟಿ ರೂಪಾಯಿಗಳನ್ನು ೧೨ ರಾಜ್ಯಗಳಿಗೆ ಹಾಗೂ ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿಯಿಂದ ೧ ಸಾವಿರದ ೯೮೮ ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಿದೆ.

ಅಸ್ಸಾಂ, ಮಣಿಪುರ, ಮೇಘಾಲಯ, ಮಿಜೋರಾಂ, ಕೇರಳ ಮತ್ತು ಉತ್ತರಾಖಂಡ ರಾಜ್ಯಗಳ ನೈಋತ್ಯ ಮಾನ್ಸೂನ್ ಸಮಯದಲ್ಲಿ ಅತಿ ಹೆಚ್ಚು ಮಳೆ, ಪ್ರವಾಹ ಮತ್ತು ಭೂಕುಸಿತದಿಂದಾಗಿ ಈ ರಾಜ್ಯಗಳು ತೊಂದರೆಗೊಳಗಾಗಿದ್ದು. ಪ್ರವಾಹ, ಭೂಕುಸಿತ, ಮೇಘಸ್ಫೋಟ ಪೀಡಿತ ರಾಜ್ಯಗಳಿಗೆ ಸಾಧ್ಯವಿರುವ ಎಲ್ಲ ಸಹಾಯವನ್ನು ಒದಗಿಸಲು ಸರ್ಕಾರ ಸಂಪೂರ್ಣವಾಗಿ ಬದ್ಧವಾಗಿದೆ ಎಂದು ಸಚಿವಾಲಯ ತಿಳಿಸಿದೆ.

<><*<><>*><>

ನಾವೀಗ ೬-ಜಿ ಕ್ರಾಂತಿಯ ಅಂಚಿನಲ್ಲಿದ್ದು, ಕೇವಲ ೧ ದಶಕದಲ್ಲಿ ಬ್ರಾಡ್ ಬ್ಯಾಂಡ್ ಬಳಕೆದಾರರ ಸಂಖ್ಯೆ ೬೦ ಮಿಲಿಯನ್‌ನಿಂದ ೯೪೦ ಮಿಲಿಯನ್‌ಗೆ ತಲುಪಿದೆ ಎಂದು ಕೇಂದ್ರ ಸಂವಹನ ಸಚಿವ ಜ್ಯೋತಿರಾಧಿತ್ಯ ಸಿಂಧಿಯಾ ತಿಳಿಸಿದ್ದಾರೆ.

ಬೆಂಗಳೂರಿನ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಪ್ರಾದೇಶಿಕ ಕಚೇರಿಯಲ್ಲಿ ತಾಂತ್ರಿಕ ಹಬ್ ಮತ್ತು ಸ್ಪೋಕ್ ಆಫ್ ಎಕ್ಸಲೆನ್ಸ್ ಉದ್ಘಾಟಿಸಿ ಮಾತನಾಡಿದ ಅವರು, ಭಾರತದ ಅಭಿವೃದ್ಧಿಗೆ ಕೊಡುಗೆ ನೀಡುವ ನವೋದ್ಯಮಗಳ ಮಹತ್ವವನ್ನು ಒತ್ತಿ ಹೇಳಿದ್ದಾರೆ.

ಉದಯೋನ್ಮುಖ ಕ್ಷೇತ್ರಗಳಾದ ಕೃತಕಬುದ್ಧಿಮತ್ತೆ-ಮಷಿನ್ ಲರ್ನಿಂಗ್, ಕ್ವಾಟಂ ಕಂಪ್ಯೂಟಿಂಗ್, ಹೆಲ್ತ್‌ಕೇರ್ ಮತ್ತು ಇತರೆ ಪ್ರಮುಖ ತಂತ್ರಜ್ಞಾನ ಕುರಿತು ಇಲ್ಲಿ ಸಂಶೋಧನೆ ನಡೆಯಲಿದೆ ಎಂದು ಹೇಳಿದ್ದಾರೆ.

೨೧೦ಕ್ಕೂ ಹೆಚ್ಚು ಇಂನಿಯರಿಂಗ್ ಕಾಲೇಜುಗಳು ೨೦ ಸಾವಿರ ಪಿಎಚ್‌ಡಿ ಪದವಿಧರರು ಮತ್ತು ೪ ಲಕ್ಷ ಪದವೀಧರರಿಗೆ ಮತ್ತು ಸ್ನಾತಕೋತ್ತರ ಪದವೀಧರರು ಇದನ್ನು ಸದ್ಬಳಕೆ ಮಾಡಿಕೊಳ್ಳಲಿದ್ದಾರೆ ಎಂದು ತಿಳಿಸಿದ್ದಾರೆ.

<><*<><>*><>

ವಿಕಸಿತ ಭಾರತದ ಗುರಿಯನ್ನು ಸಾಧಿಸುವಲ್ಲಿ ವಿಶ್ವವಿದ್ಯಾಲಯಗಳು ಪ್ರಮುಖ ಪಾತ್ರ ವಹಿಸುತ್ತವೆ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು, ಎಂದು ಹೇಳಿದರು.

ನರ್ಮದಾ ಜಿಲ್ಲೆಯ ಕೆವಾಡಿಯಾದಲ್ಲಿ ಕೇಂದ್ರೀಯ ವಿಶ್ವವಿದ್ಯಾಲಯಗಳ ಉಪಕುಲಪತಿಗಳ ೨ ದಿನಗಳ ಸಮ್ಮೇಳನವನ್ನು ಉದ್ಘಾಟಿಸಿದ ಸಚಿವರು ಕಳೆದ ದಶಕದಲ್ಲಿ ದೇಶದ ಉನ್ನತ ಶಿಕ್ಷಣ ಸಂರಚನೆಯಲ್ಲಿ ಮೂಲಭೂತ ಬದಲಾವಣೆಯಾಗಿದೆ ಎಂದು ಹೇಳಿದರು.

(ಧ್ವನಿ -ಧರ್ಮೇಂದ್ರ ಪ್ರಧಾನ್, ಕೇಂದ್ರ ಸಚಿವ)

ಚರ್ಚೆಯ ಸಮಯದಲ್ಲಿ, ಬಹುಮುಖ ಮತ್ತು ಸಮಗ್ರ ಶಿಕ್ಷಣ, ಸಂಶೋಧನೆ, ನಾವೀನ್ಯತೆ ಮತ್ತು ಚಿಂತನಾ ಕೌಶಲ್ಯಗಳ ಅಭಿವೃದ್ಧಿ, ಬೋಧನೆ ಮತ್ತು ಕಲಿಕೆಯಲ್ಲಿ ತಂತ್ರಜ್ಞಾನದ ಏಕೀಕರಣ ಮತ್ತು ಸಾಂಸ್ಥಿಕ ಆಡಳಿತದ ವಿಷಯಗಳನ್ನು ಚರ್ಚಿಸಲಾಯಿತು. ರಾಷ್ಟ್ರೀಯ ಶಿಕ್ಷಣ ನೀತಿ-೨೦೨೦ ರ ಅನುಷ್ಠಾನವನ್ನು ಹೆಚ್ಚು ಕ್ರಿಯಾತ್ಮಕಗೊಳಿಸುವ ಉದ್ದೇಶದಿಂದ ಶಿಕ್ಷಣ ಸಚಿವಾಲಯವು ಈ ಸಮ್ಮೇಳನವನ್ನು ಆಯೋಜಿಸಿದೆ.

<><*<><>*><>

ಕೇಂದ್ರ ಗೃಹ ಸಚಿವ ಅಮಿತ್ ಶಾ ಅಧ್ಯಕ್ಷತೆಯಲ್ಲಿ ೨೬ ನೇ ಪೂರ್ವ ವಲಯ ಮಂಡಳಿ ಸಭೆ ಇಂದು ರಾಂಚಿಯಲ್ಲಿ ಪ್ರಾರಂಭವಾಯಿತು.

ಜಾರ್ಖಂಡ್, ಬಿಹಾರ, ಒಡಿಶಾ ಮತ್ತು ಪಶ್ಚಿಮ ಬಂಗಾಳ ಎಂಬ ನಾಲ್ಕು ರಾಜ್ಯಗಳನ್ನು ಒಳಗೊಂಡ ದೇಶದ ಪೂರ್ವ ಭಾಗಕ್ಕೆ ಕೇಂದ್ರವು ಕೈಗೊಂಡ ಅಭಿವೃದ್ಧಿ ಉಪಕ್ರಮಗಳ ಕುರಿತು ಈ ಸಭೆ ಗಮನಹರಿಸುವ ಗುರಿಯನ್ನು ಹೊಂದಿದೆ.

ಒಡಿಶಾ ಮುಖ್ಯಮಂತ್ರಿ ಮೋಹನಚರಣ್ ಮಾಂಝಿ ಮತ್ತು ಉಪ ಮುಖ್ಯಮಂತ್ರಿ ಪಾರ್ವತಿ ಪರಿದಾ, ಬಿಹಾರ ಉಪ ಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ಮತ್ತು ರಾಜ್ಯ ಸಚಿವ ವಿಜಯ್ ಚೌಧರಿ ಸಭೆಯಲ್ಲಿ ಭಾಗವಹಿಸುತ್ತಿದ್ದಾರೆ. ಇದಕ್ಕೂ ಮೊದಲು, ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೆನ್ ಗಣ್ಯರನ್ನು ಸ್ವಾಗತಿಸಿದರು. ಬಿಹಾರ, ಒಡಿಶಾ ಮತ್ತು ಪಶ್ಚಿಮ ಬಂಗಾಳದಲ್ಲಿ ಬಾಕಿ ಇರುವ ಅಂತರರಾಜ್ಯ ಸಮಸ್ಯೆಗಳ ಕುರಿತು ಚರ್ಚೆ ಮತ್ತು ಹಿಂದಿನ ಕೌನ್ಸಿಲ್ ಸಭೆಗಳಲ್ಲಿ ತೆಗೆದುಕೊಂಡ ನಿರ್ಧಾರಗಳ ಪ್ರಗತಿಯ ವಿಮರ್ಶೆ ಸೇರಿದಂತೆ ಹಲವಾರು ಕಾರ್ಯಸೂಚಿಗಳನ್ನು ಚರ್ಚಿಸಲಾಗುತ್ತಿದೆ.

<><*<><>*><>

ಜಾಗತಿಕ ಶಕ್ತಿಯಾಗಿ ಭಾರತದ ಉದಯವು ಅದರ ಬೌದ್ಧಿಕ ಮತ್ತು ಸಾಂಸ್ಕೃತಿಕ ಶಕ್ತಿಯ ಔನತ್ಯದೊಂದಿಗೆ ಇರಬೇಕು ಎಂದು ಉಪಾಧ್ಯಕ್ಷ ಜಗದೀಪ್ ಧನ್‌ಕರ್ ಇಂದು ಹೇಳಿದರು.

ನವದೆಹಲಿಯ ಜವಾಹರಲಾಲ್ ನೆಹರು ವಿಶ್ವವಿದ್ಯಾಲಯದಲ್ಲಿ ಭಾರತೀಯ ಜ್ಞಾನ ವ್ಯವಸ್ಥೆಗಳ ಕುರಿತಾದ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ ಧನ್‌ಕರ್, ಬೌದ್ಧಿಕ ಮತ್ತು ಸಾಂಸ್ಕೃತಿಕ ಬೆಳವಣಿಗೆ ಬಹಳ ಮಹತ್ವದ್ದಾಗಿದೆ   ಒಂದು ರಾಷ್ಟ್ರದ ಬಲವು ಅದರ ಚಿಂತನೆಯ ಸ್ವಂತಿಕೆ, ಅದರ ಮೌಲ್ಯಗಳ ಸಾರ್ವಕಾಲಿಕತೆ ಮತ್ತು ಅದರ ಬೌದ್ಧಿಕ ಸಂಪ್ರದಾಯಗಳ ಸ್ಥಿತಿಸ್ಥಾಪಕತ್ವದಲ್ಲಿದೆ ಎಂದು ಅವರು ಹೇಳಿದರು.

ಯುರೋಪಿನ ವಿಶ್ವವಿದ್ಯಾಲಯಗಳು ಅಸ್ತಿತ್ವಕ್ಕೆ ಬರುವ ಮೊದಲೇ; ಭಾರತದ ವಿಶ್ವವಿದ್ಯಾಲಯಗಳು ಆಗಲೇ ಅಭಿವೃದ್ಧಿ ಹೊಂದಿದ ಕಲಿಕೆಯ ಕೇಂದ್ರಗಳಾಗಿ ಗುರುತಿಸಲ್ಪಟ್ಟಿದ್ದವು ಎಂದು ಉಪರಾಷ್ಟ್ರಪತಿಗಳು ಹೇಳಿದರು.

<><*<><>*><>

ಗುಜರಾತ್‌ನ ವಡೋದರಾ ಜಿಲ್ಲೆಯ ಮಾಹಿ ನದಿ ಸೇತುವೆ ಕುಸಿದ ಘಟನೆಯಲ್ಲಿ ಸಾವನ್ನಪ್ಪಿದವರ ಸಂಖ್ಯೆ ೧೫ ಕ್ಕೆ ಏರಿದೆ. ಇಂದು ಇನ್ನೂ ಮೂರು ಶವಗಳು ಪತ್ತೆಯಾಗಿದ್ದು, ನಾಲ್ವರು ಇನ್ನೂ ನಾಪತ್ತೆಯಾಗಿದ್ದಾರೆ ಎಂದು ವಡೋದರಾ ಜಿಲ್ಲಾಧಿಕಾರಿ ಅನಿಲ್ ಧಮೇಲಿಯಾ ತಿಳಿಸಿದ್ದಾರೆ.

ನದಿಯಿಂದ ೪ ಕಿಲೋಮೀಟರ್ ದೂರದವರೆಗೆ ಎನ್‌ಡಿಆರ್‌ಎಫ್ ಮತ್ತು ಎಸ್‌ಡಿಆರ್‌ಎಫ್ ಶೋಧ ಮತ್ತು ರಕ್ಷಣಾ ಕಾರ್ಯಾಚರಣೆ ನಡೆಸುತ್ತಿವೆ. ಘಟನೆಯ ಪ್ರಾಥಮಿಕ ವರದಿಯನ್ನು ಇಂದು ಸಂಜೆಯೊಳಗೆ ರಾಜ್ಯ ಸರ್ಕಾರಕ್ಕೆ ಸಲ್ಲಿಸಲಾಗುವುದು. ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಅವರ ನಿವಾಸದಲ್ಲಿ ನಡೆದ ಸಭೆಯಲ್ಲಿ ಸೇತುವೆ ಅಪಘಾತದ ಬಗ್ಗೆ ಚರ್ಚಿಸಲಾಯಿತು ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

<><*<><>*><>

ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಗಳನ್ನು ಬಲಪಡಿಸುವ ಮಾರ್ಗಸೂಚಿಯನ್ನು ನೀತಿ ಆಯೋಗ ಇಂದು ನವದೆಹಲಿಯಲ್ಲಿ ಬಿಡುಗಡೆ ಮಾಡಿದೆ.

ಈ ಸಂದರ್ಭದಲ್ಲಿ ಸಚಿವ ಡಾ. ಜಿತೇಂದ್ರ ಸಿಂಗ್, ನೀತಿ ಆಯೋಗದ ಉಪಾಧ್ಯಕ್ಷ ಸುಮನ್ ಬೆರಿ ಮತ್ತು ನೀತಿ ಆಯೋಗದ ಸದಸ್ಯ ಡಾ. ವಿ. ಕೆ. ಸಾರಸ್ವತ್ ಉಪಸ್ಥಿತರಿದ್ದರು.

ಈ ಮಾರ್ಗಸೂಚಿಯು ಭಾರತದಾದ್ಯಂತ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಗಳ ಪಾತ್ರ ಮತ್ತು ಕಾರ್ಯನಿರ್ವಹಣೆಯನ್ನು ಬಲಪಡಿಸುವ ಕಾರ್ಯತಂತ್ರದ ದೃಷ್ಟಿಕೋನವನ್ನು ವಿವರಿಸುತ್ತದೆ.

<><*<><>*><>

ಘಾನಾ, ಟ್ರಿನಿಡಾಡ್ ಮತ್ತು ಟೊಬಾಗೊ, ಅರ್ಜೆಂಟೀನಾ, ಬ್ರೆಜಿಲ್ ಮತ್ತು ನಮೀಬಿಯಾಗಳಿಗೆ ಐದು ರಾಷ್ಟ್ರಗಳ ಪ್ರವಾಸವನ್ನು ಅತ್ಯಂತ ಯಶಸ್ವಿ ಎಂದು ಬಿಜೆಪಿ ಬಣ್ಣಿಸಿದೆ.

ನವದೆಹಲಿಯಲ್ಲಿ ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಪಕ್ಷದ ವಕ್ತಾರ ಸುಧಾಂಶು ತ್ರಿವೇದಿ, ಬ್ರಿಕ್ಸ್ ಶೃಂಗಸಭೆಯ ಸಂದರ್ಭದಲ್ಲಿ ಅಂತರರಾಷ್ಟ್ರೀಯ ವೇದಿಕೆಗಳಲ್ಲಿ ಪ್ರಧಾನಿಯವರು ಭಯೋತ್ಪಾದನೆಯ ವಿಷಯದ ಬಗ್ಗೆ ಜಾಗತಿಕ ಸ್ವೀಕಾರವನ್ನು ಸ್ಥಾಪಿಸಿದರು ಎಂದು ಹೇಳಿದರು.

ಶೃಂಗಸಭೆಯಲ್ಲಿ, ಭಯೋತ್ಪಾದನೆಯ ವಿಷಯದ ಬಗ್ಗೆ ಭಾರತದ ನಿಲುವಿಗೆ ಸರ್ವಾನುಮತದ ಅನುಮೋದನೆ ದೊರೆತಿದ್ದು ಮಾತ್ರವಲ್ಲದೆ, ಭಯೋತ್ಪಾದನೆಯ ಬಲಿಪಶುಗಳು ಮತ್ತು ಭಯೋತ್ಪಾದನೆಯ ಪ್ರಾಯೋಜಕರನ್ನು ಒಂದೇ ತಕ್ಕಡಿಯಲ್ಲಿ ತೂಗಲು ಸಾಧ್ಯವಿಲ್ಲ ಎಂದು ಪ್ರಧಾನಿ ಸ್ಪಷ್ಟವಾಗಿ ಹೇಳಿದ್ದಾರೆ. ಖನಿಜಗಳು ಮತ್ತು ಅಪರೂಪದ ಲೋಹಗಳಿಂದ ಸಮೃದ್ಧವಾಗಿರುವ ಘಾನಾ ಮತ್ತು ನಮೀಬಿಯಾದೊಂದಿಗೆ ಭಾರತ ಒಪ್ಪಂದ ಮಾಡಿಕೊಂಡಿದೆ ಎಂದು ಅವರು ಹೇಳಿದರು.

ಬ್ರಿಕ್ಸ್ ಮತ್ತು ಕ್ವಾಡ್‌ನ ಸದಸ್ಯರಾಗಿರುವ ಏಕೈಕ ದೇಶ ಭಾರತ ಎಂದು ತ್ರಿವೇದಿ ಹೇಳಿದರು. ಭಾರತದ ವಿದೇಶಾಂಗ ನೀತಿ ಹೊಸ ಯುಗಕ್ಕೆ ಪ್ರವೇಶಿಸಿದೆ ಎಂಬುದನ್ನು ಇದು ಸಾಬೀತುಪಡಿಸುತ್ತದೆ ಎಂದು ತ್ರಿವೇದಿ ಹೇಳಿದರು.

<><*<><>*><>

ಗ್ರೀಸ್‌ನಲ್ಲಿ ನಡೆದ ಡ್ರೋಮಿಯಾ ಅಂತರರಾಷ್ಟ್ರೀಯ ಸ್ಪ್ರಿಂಟ್ ಮೀಟ್‌ನಲ್ಲಿ ಛತ್ತೀಸ್‌ಗಢದ ಅನಿಮೇಶ್ ಕುಜೂರ್ ೧೦.೧೮ ಸೆಕೆಂಡುಗಳಲ್ಲಿ ೧೦೦ ಮೀಟರ್ ಓಟವನ್ನು ಪೂರ್ಣಗೊಳಿಸುವ ಮೂಲಕ ಹೊಸ ರಾಷ್ಟ್ರೀಯ ದಾಖಲೆಯನ್ನು ಸೃಷ್ಟಿಸಿದ್ದಾರೆ. ಈ ಸಾಧನೆಗೆ ಛತ್ತೀಸ್‌ಗಢ ಮುಖ್ಯಮಂತ್ರಿ ವಿಷ್ಣುದೇವ್ ಸಾಯಿ ಅನಿಮೇಶ್ ಅವರನ್ನು ಅಭಿನಂದಿಸಿದ್ದಾರೆ.

<><*<><>*><>

ಲಂಡನ್‌ನ ಲಾರ್ಡ್ಸ್‌ನಲ್ಲಿ ನಡೆಯುತ್ತಿರುವ ಭಾರತ ಮತ್ತು ಇಂಗ್ಲೆಂಡ್ ನಡುವಿನ ಆಂಡರ್ಸನ್-ತೆಂಡೂಲ್ಕರ್ ಟ್ರೋಫಿಯ ಮೂರನೇ ಟೆಸ್ಟ್ ಪಂದ್ಯದಲ್ಲಿ ಇತ್ತೀಚಿನ ವರದಿ ಬಂದಾಗ ಆತಿಥೇಯ ಇಂಗ್ಲೆಂಡ್ ೨ ವಿಕೆಟ್ ನಷ್ಟಕ್ಕೆ ೧೧೫ರನ್ ಗಳಿಸಿ ಆಡುತ್ತಿದೆ.

ಆಲ್ ರೌಂಡರ್ ನಿತೀಶ್ ರೆಡ್ಡಿ ಒಂದೇ ಓವರ್‌ನಲ್ಲಿ ಬೆನ್ ಡಕೆಟ್ ಮತ್ತು ಜ್ಯಾಕ್ ಕ್ರಾಲಿ ವಿಕೆಟ್ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.

ಹೆಡಿಂಗ್ಲಿಯಲ್ಲಿ ಇಂಗ್ಲೆಂಡ್ ಐದು ವಿಕೆಟ್‌ಗಳ ಗೆಲುವು ಮತ್ತು ಎಡ್ಜ್‌ಬಾಸ್ಟನ್‌ನಲ್ಲಿ ಭಾರತ ೩೩೬ ರನ್‌ಗಳ ಭರ್ಜರಿ ಜಯ ಸಾಧಿಸಿದ ನಂತರ ಐದು ಪಂದ್ಯಗಳ ಸರಣಿಯು ೧-೧ ರಲ್ಲಿ ಸಮಬಲದಲ್ಲಿದೆ.

<><*<><>*><>

<><*<><>*><>